5-3-2025

12

# **ಕರ್ನಾಟಕ ವಿಧಾನ ಪರಿಷತ್ತು**

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ರವರು ಶೂನ್ಯ ವೇಳೆಯಲ್ಲಿ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ರಾಜ್ಯ ಗ್ರಾಮ ಪಂಚಾಯಿತಿ ನೌಕರರು ಕನಿಷ್ಠ ವೇತನ ಜಾರಿ ಸಲುವಾಗಿ ಪ್ರತಿಭಟಿಸಿರುವ ವಿಚಾರವು ದಿನಾಂಕ:04.03.2025ರ ಪ್ರಜಾವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದಿಂದ ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ನಿನ್ನೆಯ ದಿನ ಪ್ರತಿಭಟನೆ ನಡೆದಿದ್ದು, ಅನ್ಯ ಇಲಾಖೆಯ ಸಿಬ್ಬಂದಿಯನ್ನು ಗ್ರಾಮ ಪಂಚಾಯಿತಿ ನೌಕರರೆಂದು ಪರಿಗಣಿಸಬಾರದು. ಪಂಚಾಯಿತಿ ನೌಕರರಿಗೆ ಪ್ರತಿ ತಿಂಗಳಿಗೆ ಕನಿಷ್ಠ ವೇತನ ರೂ.35,000/- ನಿಗಧಿಪಡಿಸಬೇಕು. ಮಧ್ಯಂತರ ಪರಿಹಾರವಾಗಿ ಪ್ರತಿ ತಿಂಗಳು ರೂ.3,000/- ವಿತರಣೆ ಮಾಡಬೇಕು. ಪಂಚಾಯಿತಿಗಳಲ್ಲಿ ಕೆಲಸ ನಿರ್ವಹಿಸುವ ನೌಕರರು ನಿವೃತ್ತಿ ಹೊಂದಿದರೆ ಅವರಿಗೆ ಪ್ರತಿ ತಿಂಗಳು ಕನಿಷ್ಠ ರೂ.6,000/- ಪಿಂಚಣಿ ನೀಡಬೇಕು. ಕರವಸೂಲಿಗಾರರು, ಗುಮಾಸ್ತರು, ಡಾಟಾಎಂಟ್ರಿ ಅಪರೇಟರ್ಸ್ , ನೀರು ಗಂಟಿಗಳು, ಸ್ವಚ್ಛತಾ ಕೆಲಸಗಾರರನ್ನು ಏಕ ಕಾಲಕ್ಕೆ ಸರ್ಕಾರಿ ನೌಕರರೆಂದು ಘೋಷಣೆ ಮಾಡಬೇಕು. ಸೇವಾ ಹಿರಿತನ ಆಧರಿಸಿ ವೇತನ ಹೆಚ್ಚಳ ಮಾಡಬೇಕು. ಐಪಿಡಿ ಸಾಲಪ್ಪ ವರದಿಯಂತೆ ಸ್ವಚ್ಛತಾ ಕೆಲಸಗಾರರನ್ನು ನೇಮಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿರುತ್ತಾರೆ.

ಸರ್ಕಾರ ನ್ಯಾಯಸಮ್ಮತವಾಗಿರುವ ಇವರ ಬೇಡಿಕೆಗಳನ್ನು ಪರಿಗಣಿಸಬೇಕು. ಮುಖ್ಯವಾಗಿ ಕಾಲಮಿತಿಯೊಳಗೆ ಇವರಿಗೆ ಕನಿಷ್ಠ ವೇತನವನ್ನು ಜಾರಿಗೊಳಿಸಬೇಕು.

**ಉತ್ತರ:** ಗ್ರಾಮ ಪಂಚಾಯತಿ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯನ್ನು ಪಾವತಿಸಲಾಗುತ್ತಿದೆ. ಅದರ ವಿವರ ಕೆಳಕಂಡಂತಿದೆ.

| ಕ್ರ ಸಂ | ಪದನಾಮ | ಕನಿಷ್ಠ ವೇತನ ನೀಡುತ್ತಿರುವ ವಿವರ (ರೂ.ಗಳಲ್ಲಿ) | ವ್ಯತ್ಯಾಸವಾಗುವ ತುಟ್ಟಿಭತ್ಯೆ (ರೂ.ಗಳಲ್ಲಿ) | ಒಟ್ಟು (ರೂ.ಗಳಲ್ಲಿ) |
|---|---|---|---|---|
| 1 | ಬಿಲ್ ಕಲೆಕ್ಟರ್ | 15,196.72 | 2223.60 | 17420.32 |
| 2 | ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ | 15,196.72 | 2223.60 | 17420.32 |
| 3 | ವಾಟರ್ ಆಪರೇಟರ್ | 13,509.32 | 2223.60 | 15732.92 |
| 4 | ಅಟೆಂಡಂಟ್ | 12,873.52 | 2223.60 | 15097.12 |
| 5 | ಕ್ಲೀನರ್ಸ್ | 16,019.52 | 2223.60 | 18243.12 |

ಮುಂದುವರೆದು, ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆಯೊಂದಿಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

1) ಗ್ರಾಮ ಪಂಚಾಯಿತಿ ನೌಕರರಿಗೆ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆ ಮತ್ತು ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ನೀಡಲಾಗುತ್ತದೆ.

2) ಪ್ರಸ್ತುತ ಸೇವೆಯಿಂದ ನಿವೃತ್ತಿಯಾಗುವ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.

3) ಗ್ರಾಮ ಪಂಚಾಯಿತಿ ಸಿಬ್ಬಂದಿಯು ಸೇವೆಯಲ್ಲಿದ್ದಾಗ ಮರಣ ಹೊಂದಿದಲ್ಲಿ ಅವರ ನ್ಯಾಯಬದ್ಧ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

4) ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಹಾಗೂ ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10.000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಅವಕಾಶ ಕಲ್ಪಿಸಲಾಗಿದೆ.

5) ಬಿಲ್ ಕಲೆಕ್ಟರ್ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್/ ಅಟೆಂಡೆಂಟ್/ ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

6) ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ / ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಸೇವೆಯೊಳಗಿನ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಿಗನುಸಾರವಾಗಿ ಬಿಲ್‌ಕಲೆಕ್ಟರ್ / ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ನೌಕರರಿಂದ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ.

ಗ್ರಾಮ ಪಂಚಾಯತಿ ನೌಕರರಿಗೆ ಆರೋಗ್ಯ ಭದ್ರತೆ ಕಲ್ಪಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.

1) ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾದಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಟಿಯಿಂದ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿಯ ಈ ಕೆಳಕಂಡ ವಿಮಾ ಪಾಲಿಸಿಗಳನ್ನು ಕಡ್ಡಾಯವಾಗಿ ಮಾಡಿಸಲು ಮತ್ತು ಸಂಬಂಧಿಸಿದ ಸಿಬ್ಬಂದಿಗಳ ವೇತನದ ಬ್ಯಾಂಕ್ ಖಾತೆಗೆ ಲಿಂಕ್ ಮಾಡಿಸಿ, ವಾರ್ಷಿಕವಾಗಿ ಕಟಾವಣೆ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ.

- ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ
- ಪ್ರಧಾನ ಮಂತ್ರಿ ಸುರಕ್ಷಾ ಜ್ಯೋತಿ ಭೀಮಾ ಯೋಜನೆ
- ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಫರ್ಸನಲ್ ಆಕ್ಸಿಡೆಂಟ್ ಇನ್‌ಶ್ಯೂರೆನ್ಸ್

2) ಗ್ರಾಮ ಪಂಚಾಯತ್ ನೌಕರರು ಕೋವಿಡ್-19 ಕರ್ತವ್ಯ ನಿರ್ವಹಿಸುತ್ತಿದ್ದಾಗ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮರಣ ಹೊಂದಿದ್ದಲ್ಲಿ ಅವರ ಕುಟುಂಬದವರಿಗೆ 30 ಲಕ್ಷ ರೂ. ಪರಿಹಾರ ನೀಡಲು ಅಥವಾ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಅನಾರೋಗ್ಯಗೊಂಡಲ್ಲಿ ಸದರಿ ಚಿಕಿತ್ಸೆಗಾಗಿ ತಗಲುವ ವೈದ್ಯಕೀಯ ವೆಚ್ಚ ಭರಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಶ್ವಾಸನೆ ನಿಧಿಯನ್ನು ಸ್ಥಾಪಿಸಿ ಪರಿಹಾರ ನೀಡಲು ತಿಳಿಸಲಾಗಿದೆ.

3) ಗ್ರಾಮ ಪಂಚಾಯತಿ ನೌಕರರಿಗೆ ತೀವ್ರ ಸ್ವರೂಪದ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್, ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್, ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಾಯಿಲೆಗಳಿಗೆ ತುತ್ತಾದಲ್ಲಿ ವೈದ್ಯಕೀಯ ವೆಚ್ಚ ಗರಿಷ್ಠ ರೂ. 50,000/- ಗಳನ್ನು ಒಂದು ಬಾರಿಗೆ ಮಾತ್ರ ಪಾವತಿಸಲು ಆದೇಶಿಸಲಾಗಿದೆ.

ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸೇವಾ ಹಿರಿತನದ ವೇತನ ನಿಗಧಿಪಡಿಸಲು ಮತ್ತು ವೇತನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

**ಸಂಖ್ಯೆ: ಗ್ರಾಅಪ 187 ಗ್ರಾಪಂಅ 2025**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.